**ಸಾಕ್ಷಿಯನ್ನು ಸತ್ಯ ಪ್ರತಿಜ್ಞೆಯ ಮೇರೆಗೆ ಇಂದು ದಿನಾಂಕ:21.02.2026 ರಂದು ಪ್ರಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆ: ವಾದಿಗಳ ಪರ ಶ್ರೀಮತಿ ಸಿ ಆರ್ ಕೆ ವಕೀಲರಿಂದ.**

ನಾನು ಈ ದಾವೆಯಲ್ಲಿ ವಾದಿಪರ ಸಾಕ್ಷಿದಾರ ಇರುತ್ತೇನೆ. ಈ ದಿನ ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮುಖಾಂತರ ಸಲ್ಲಿಸಿರುತ್ತೇನೆ. ನನ್ನ ಪ್ರಮಾಣ ಪತ್ರದಲ್ಲಿ ಬರೆದಿರುವ ಎಲ್ಲಾ ವಿಷಯಗಳು ನನಗೆ ತಿಳಿದ ಮಾಹಿತಿಯಂತೆ ಸತ್ಯವಾಗಿರುತ್ತವೆ. ಪ್ರಮಾಣ ಪತ್ರವನ್ನು ನಾನು ನೀಡಿದ ಮಾಹಿತಿ ಮೇರೆಗೆ ತಯಾರಿಸಲಾಗಿರುತ್ತದೆ. ಪ್ರಮಾಣ ಪತ್ರವನ್ನು ನನಗೆ ಓದಿ ಹೇಳಲಾಗಿದ್ದು, ಅದನ್ನು ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ಸಾಕ್ಷಿಯು ನಿ ಪಿ 1 ಮತ್ತು 2 ರಲ್ಲಿನ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅವುಗಳನ್ನು ಈಗಾಗಲೇ ನಿ ಪಿ 1(ಬಿ) ಮತ್ತು 2(ಬಿ) ಎಂದು ಗುರುತಿಸಲಾಗಿದೆ. ಅದೇ ರೀತಿ ಸಾಕ್ಷಿಯು ಪ್ರತಿವಾದಿಯ ಸಹಿಯನ್ನು ನೋಡಿ ಗುರುತಿಸಿದ್ದು ಅವುಗಳನ್ನು ಈಗಾಗಲೇ ನಿ ಪಿ 1(ಎ) ಮತ್ತು 2(ಎ) ಎಂದು ಗುರುತಿಸಲಾಗಿದೆ.

ವಾದಿಯ ದಾವೆಯನ್ನು ಪುರಸ್ಕರಿಸಬೇಕಾಗಿ ಮಾನ್ಯ ನ್ಯಾಯಾಲಯಕ್ಕೆ ಪ್ರಾರ್ಥಿಸಿಕೊಳ್ಳುತ್ತೇನೆ.

ಪ್ರತಿವಾದಿ ಏಕಪಕ್ಷೀಯವಿದ್ದು ಈ ಸಾಕ್ಷಿಯ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿಯಾಗಿದೆ.

(ಸಚಿನ್ ಹೆಚ್.ಆರ್)
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ .ಎಂ.ಎಫ್.ಸಿ., ತಿ.ನರಸೀಪುರ.